ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಶಾಲೆಗಳ ಬಗ್ಗೆ

ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):-

43 (94) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಎಷ್ಟು ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರ, ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಸತಿ ನಿಲಯಗಳನ್ನು ನಿರ್ವಹಣೆ ಮಾಡಲಾಗುತ್ತಿದೆ; (ಸಂಖ್ಯಾಬಲವನ್ನು ನೀಡುವುದು)

(ಆ) ಇವುಗಳಲ್ಲಿರುವ ನಿಲಯಗಳಿಗೆ ಸಮರ್ಪಕವಾದ ಅಗತ್ಯ ಮೂಲ ಸೌಕರ್ಯಗಳಾದ ಆಹಾರ, ಸ್ಥಳಾವಕಾಶ, ನೀರಿನ ಸೌಕರ್ಯ, ವಿದ್ಯುತ್ ಸೌಲಭ್ಯ, ಲೈಬ್ರರಿ ವ್ಯವಸ್ಥೆ ಇತ್ಯಾದಿ ಸೌಕರ್ಯಗಳನ್ನು ಒದಗಿಸಲಾಗಿದೆ;

(ಇ) ಇಲ್ಲದಿದ್ದಲ್ಲಿ, ಈ ಸೌಲಭ್ಯಗಳನ್ನು ಒದಗಿಸಲು ಯಾವ ರೀತಿ ಕ್ರಮವಹಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು)